ಡಿ-72-(47)

## ಕರ್ನಾಟಕ ವಿಧಾನ ಪರಿಷತ್ತು.

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಎಸ್.ರವಿ ಹಾಗೂ ಆರ್ ಪ್ರಸನ್ನಕುಮಾರ್ ಇವರು ಇತ್ತೀಚಿಗೆ ಕೊರೋನಾ ವೈರಸ್‌ನಿಂದ ರೋಗಿಗಳು ಹೆಚ್ಚಾಗುತ್ತಿದ್ದು, ರೋಗಿಗಳು ಆಸ್ಪತ್ರೆಗಳಲ್ಲಿ ಹಾಸಿಗೆಗಳು, ವೆಂಟಿಲೇಟರ್‌ಗಳು ಲಭ್ಯವಿಲ್ಲದೆ, ಸಾರ್ವಜನಿಕರಿಗೆ ತೀವ್ರ ತೊಂದರೆಯಾಗಿರುತ್ತದೆ. ಅಲ್ಲದೆ, ರೋಗಿಗಳಿಗೆ ತುರ್ತು ಸಂದರ್ಭದಲ್ಲಿ ವೈರಾಣು ವಿರುದ್ಧ ನೀಡುವ ಔಷಧಿಗಳಾದ ರೆಮ್‌ಡೆಸಿವಿರ್ ಇನ್ಸೆಂಕ್ಷನ್‌ಗಳು ತುರ್ತಾಗಿ ಲಭ್ಯವಾಗದೆ ಮಧ್ಯವರ್ತಿಗಳು ದುಪ್ಪಟ್ಟು ಹಣಕ್ಕೆ ಮಾರಾಟ ಮಾಡಿರುವುದು ಕಂಡು ಬಂದಿರುತ್ತದೆ. ಆದುದರಿಂದ ಕೊರೋನಾ ಸಂದರ್ಭದಲ್ಲಿ ರಾಜ್ಯದಲ್ಲಿ ಸೋಂಕಿತರಿಗೆ ವಿತರಿಸಿರುವ ಜೀವ ರಕ್ಷಕ ಔಷಧಿಗಳ ಬಗ್ಗೆ ಸರ್ಕಾರದ ಕೈಗೊಂಡ ಕ್ರಮಗಳ ಬಗ್ಗೆ ನಿಯಮ 72ರ ಅಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಹೇಳಿಕೆ.**

ರಾಜ್ಯ ಸರ್ಕಾರದಿಂದ ರಾಜೀವ್ ಗಾಂಧಿ ಆರೋಗ್ಯ ವಿಶ್ವ ವಿದ್ಯಾಲಯ, ಉಪ ಕುಲಪತಿಯವರ ಅಧ್ಯಕ್ಷತೆಯಲ್ಲಿ ಫಲ್ಮನಾಲಜಿಸ್ಟ್, ಫಿಸೀಶಿಯನ್, ಅರವಳಿಕೆ, ಇತ್ಯಾದಿ ತಜ್ಞರಗಳನ್ನು ಒಳಗೊಂಡ ಕ್ಲಿನಿಕಲ್ ಮ್ಯಾನೇಜ್‌ಮೆಂಟ್ ಸಮಿತಿಯನ್ನು ರಚಿಸಲಾಗಿದ್ದು, ಈ ಸಮಿತಿಯು ಐ.ಸಿ.ಎಂ.ಆರ್/ಭಾರತ ಸರ್ಕಾರ ಮಾರ್ಗ ಸೂಚಿಗಳಂತೆ ಕಾಲಕಾಲಕ್ಕೆ ಕೋವಿಡ್-19 ಸೋಂಕಿತರಿಗೆ ಬೇಕಾಗಿರುವ ಚಿಕಿತ್ಸಾ ವಿಧಾನ ಮಾರ್ಗ ಸೂಚಿಗಳನ್ನು ರೂಪಿಸುತ್ತಿದೆ. ಪ್ರಸ್ತುತ ಕ್ಲಿನಿಕಲ್ ಪ್ರೋಟೋಕಾಲ್ ಆವೃತ್ತಿ 3.0 ಜಾರಿಯಲ್ಲಿರುತ್ತದೆ.

ಕ್ಲಿನಿಕಲ್ ಮ್ಯಾನೇಜ್‌ಮೆಂಟ್ ಸಮಿತಿಯ ಮಾರ್ಗಸೂಚಿಯಂತೆ ಕೋವಿಡ್-19 ಸೋಂಕಿತರಿಗೆ ಅಗತ್ಯವಿರುವ ಔಷಧಗಳನ್ನು ಎಲ್ಲಾ ಆಸ್ಪತ್ರೆಗಳಲ್ಲಿ ಎಲ್ಲಾ ಸಮಯದಲ್ಲಿ ಲಭ್ಯವಿರುವಂತೆ ಖಚಿತಪಡಿಸಿಕೊಳ್ಳಲಾಗಿದೆ. ಈ ಔಷಧಗಳನ್ನು ಕರ್ನಾಟಕ ರಾಜ್ಯ ಡ್ರಗ್ಸ್ ಲಾಜಿಸ್ಟಿಕ್ಸ್ ಮತ್ತು ವೇರ್ ಹೌಸಿಂಗ್ ಸೊಸೈಟಿಯ ಮೂಲಕ ಕೇಂದ್ರಿಕೃತ ವ್ಯವಸ್ಥೆಯ ಮೂಲಕ ಸಂಗ್ರಹಣೆ ಹಾಗೂ ಸರಬರಾಜು ಮಾಡಲಾಗಿದೆ. ಇದಲ್ಲದೆ ಆಸ್ಪತ್ರೆಯ ಆರೋಗ್ಯ ರಕ್ಷಾ ಸಮಿತಿಯಲ್ಲಿ ಲಭ್ಯವಿರುವ ಅನುದಾನದಿಂದ ಸಹ ಅಗತ್ಯವಿರುವ ಔಷಧಗಳನ್ನು ಸಂಗ್ರಹಿಸಲು ಅನುಮತಿ ನೀಡಲಾಗಿದೆ.

ಕೋವಿಡ್-19 ಸಾಂಕ್ರಾಮಿಕ ನಿಯಂತ್ರಣಕ್ಕಾಗಿ ರಾಜ್ಯದಲ್ಲಿ 5Ts (Testing, Tracing, Tracking, Treatment and Technology) ನಿರ್ವಹಣ ಮಾದರಿಯನ್ನು ಅನುಸರಿಸಲಾಗುತ್ತಿದೆ.

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯದ ಮಾರ್ಗಸೂಚಿಗಳನ್ವಯ, ಕೊರೋನಾ ಪ್ರಕರಣಗಳ ಕ್ಲಿನಿಕಲ್ ನಿರ್ವಹಣೆ ಕುರಿತ ಮಾರ್ಗಸೂಚಿಗಳನ್ನು ರಾಜ್ಯದಲ್ಲಿ ಕಾಲಕಾಲಕ್ಕೆ ಪರಿಷ್ಕರಿಸಲಾಗುತ್ತಿದೆ. ಅದರಂತೆ ರಾಜ್ಯದ ಎಲ್ಲಾ ಕೋವಿಡ್ ಆಸ್ಪತ್ರೆಗಳಲ್ಲಿ inj. Remdesivir, Azithromycin, levofloxicin, Dobutamin, Methyl Prednisolone, Hydroxy Chloroquine Sulphate, Oseltamavir, Dexamethasone, Vitamin C, Zinc, Paracetamol, Cetirizine, Cough Syrup, Low Molecular Weight Heparin ಇತ್ಯಾದಿಗಳು ಲಭ್ಯವಿರುವಂತೆ ವ್ಯವಸ್ಥೆ ಮಾಡಲಾಗಿದೆ.

...2

ರಾಜ್ಯ ಸರ್ಕಾರದಿಂದ ಎಲ್ಲಾ ಸರ್ಕಾರಿ ಆಸ್ಪತ್ರೆಗಳಿಗೆ ರೆಮ್‌ಡೆಸಿವಿರ್ ಇಂಜೆಕ್ಷನ್ ನಂತಹ ನೋವೆಲ್ ಡ್ರಗ್ಸ್‌ಗಳನ್ನು ಉಚಿತವಾಗಿ ನೀಡಲಾಗುತ್ತಿದೆ. ಖಾಸಗಿ ಆಸ್ಪತ್ರೆಗಳಲ್ಲಿ ಕೋವಿಡ್-19 ಚಿಕಿತ್ಸೆಗಾಗಿ ನಿಗದಿಪಡಿಸಿರುವ ದರದಲ್ಲಿ ಇಂತಹ ಔಷಧಗಳು ಸೇರಿರುವುದಿಲ್ಲ. ಆದುದರಿಂದ, ಸರ್ಕಾರದ ಮೂಲಕ ಖಾಸಗಿ ಆಸ್ಪತ್ರೆಗಳಿಗೆ ಸೂಚಿತವಾಗುವ ಕೋವಿಡ್-19 ಸೋಂಕಿತರಿಗೆ ರೆಮ್‌ಡೆಸಿವಿರ್ ಇಂಜೆಕ್ಷನ್‌ನ್ನು ಕರ್ನಾಟಕ ಸ್ಟೇಟ್ ಡ್ರಗ್ಸ್ ಲಾಜಿಸ್ಟಿಕ್ಸ್ ಮತ್ತು ವೇರ್ ಹೌಸಿಂಗ್ ಸೊಸೈಟಿ ಹಾಗೂ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟನ ಮೂಲಕ ಉಚಿತವಾಗಿ ಒದಗಿಸಲಾಗುತ್ತಿದೆ.

**ಆಕುಕ 58 ಎಸ್.ಟಿ.ಕ್ಯೂ 2020.**

**(ಬಿ. ಶ್ರೀರಾಮುಲು)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು